ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸ್ಪೀಕರ್

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 29/10/2019

ಸಮಾಚಾರ ಸಣ್ಣದಲ್ಲ

# ಸುಪ್ರೀಂಕೋರ್ಟ್‌ನಲ್ಲಿ ನ್ಯಾಯ ಸಿಗಲಿದೆ



ಮಸ್ಕಿ: ನನ್ನನ್ನು ಸೇರಿದಂತೆ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ 17 ಶಾಸಕರನ್ನು ಅನರ್ಹಗೊಳಿಸಿದ ಸ್ಪೀಕರ್ ಆದೇಶದ ವಿರುದ್ಧ ಸುಪ್ರಿಂ ಕೋರ್ಟ್‌ನಲ್ಲಿ ವಿಚಾರಣೆ ಮುಗಿದಿದ್ದು, ನ.5 ಅಥವಾ 6ರಂದು ತೀರ್ಪು ಹೊರ ಬರುವ ನಿರೀಕ್ಷೆ ಇದೆ ಎಂದು ಅನರ್ಹ ಶಾಸಕ ಪ್ರತಾಪಗೌಡ ಪಾಟೀಲ್ ಹೇಳಿದರು. ಸುದ್ದಿಗಾರರ ಜತೆ ಮಾತನಾಡಿ, ನಾವು ಸ್ವ ಇಚ್ಛೆಯಿಂದಲೇ ರಾಜೀನಾಮೆ ನೀಡಿದ್ದೇವೆ. ನಮ್ಮ ರಾಜೀನಾಮೆ ಅಂಗೀಕರಿಸದ ಸ್ಪೀಕರ್ ಅವರು ನಮ್ಮನ್ನು ಶಾಸಕ ಸ್ಥಾನದಿಂದ ಅನರ್ಹಗೊಳಿಸಿದ್ದನ್ನು ಪ್ರಶ್ನಿಸಿ ನಾವು ಸುಪ್ರೀಂ ಮೆಟ್ಟಿಲು ಹೇರಿದ್ದೇವೆ. ನಮಗೆ ನ್ಯಾಯಾಲಯದಲ್ಲಿ ನ್ಯಾಯ ಸಿಗುತ್ತದೆ. ಉಪ ಚುನಾವಣೆಯಲ್ಲಿ ಮಸ್ಕಿ ಕ್ಷೇತ್ರದಿಂದ ಬಿಜೆಪಿಯಿಂದ ಸ್ಪರ್ಧಿಸಲು ಪ್ರಯತ್ನಿಸುತ್ತಿರುವ ಆರ್.ಬಸನಗೌಡ ಅವರನ್ನು ಪಕ್ಷದ ವರಿಷ್ಠರು ಮನವೊಲಿಸುತ್ತಿದ್ದಾರೆ. ಹೈಕೋರ್ಟ್‌ನಲ್ಲಿ ವಿರುದ್ಧ ಹಾಕಿರುವ ಪ್ರಕರಣ ಹಿಂದಕ್ಕೆ ಪಡೆಯುವಂತೆಯೂ ಆರ್. ಬಸನಗೌಡ ಅವರಿಗೆ ಪಕ್ಷದ ಮುಖಂಡರು ಈಗಾಗಲೇ ಸೂಚಿಸಿದ್ದಾರೆ. ಬರುವ ದಿನಗಳಲ್ಲಿ ಎಲ್ಲವೂ ಸ್ಪಷ್ಟವಾಗಲಿದೆ ಎಂದರು.

3